# ಗದಗ

# ಪ್ರಮುಖ ಸುದ್ದಿ ಜಿಲ್ಲಾಮಟ್ಟಕ್ಕೆ ಸೀಮಿತವಾಗದಿರಲಿ

## | ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ | ಪತ್ರಕರ್ತೆ ರಶ್ಮಿಗೆ ಅವ್ವ ದತ್ತಿ ನಿಧಿ ಪ್ರಶಸ್ತಿ ಪ್ರದಾನ





**ಗದಗ: ನಗರದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪತ್ರಕರ್ತೆ ರಶ್ಮಿ ಎಸ್. ಅವರಿಗೆ ಅವ್ವ ಸೇವಾ ಟ್ರಸ್ಟ್‌ನ ದತ್ತಿನಿಧಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. (ಬಲಚಿತ್ರ)**

**ಗದಗ:** ಜಿಲ್ಲೆ, ರಾಜ್ಯ, ರಾಷ್ಟ್ರದ ಬದಲಾವಣೆಗೆ ಕಾರಣವಾಗುವಂತಹ ಸುದ್ದಿಗಳು ಕೂಡ ಇಂದು ಜಿಲ್ಲಾಮಟ್ಟಕ್ಕೆ ಸೀಮಿತಗೊಳ್ಳುತ್ತಿರುವುದು ವಿಷಾದನೀಯ. ಮಹತ್ವದ ಸುದ್ದಿಗಳನ್ನು ಎಲ್ಲ ಆವೃತ್ತಿಯಲ್ಲಿ ಪ್ರಕಟಿಸುವ ನಿಟ್ಟಿನಲ್ಲಿ ಪತ್ರಿಕೆಗಳು ಯೋಚಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಶ್ರೀನಿವಾಸ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ರವಿವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅವ್ವ ಸೇವಾ ಟ್ರಸ್ಟ್‌ನವರು ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜನಕಲ್ಯಾಣ ಮಾಡುತ್ತಿರುವ ಜನಸೇವಕರು, ಬೆಳೆಯುತ್ತಿರುವ ನಾಯಕರು, ಕಲಾವಿದರು, ಸಂಗೀತಗಾರರು, ಕ್ರೀಡಾಪಟುಗಳ ಸಾಧನೆ ಯಾವು ಪತ್ರಿಕೆಗಳಲ್ಲಿ ಕೇವಲ ಜಿಲ್ಲೆಗೆ ಸೀಮಿತಗೊಳ್ಳುತ್ತಿರುವುದರಿಂದ ಅನ್ಯಾಯವಾಗುತ್ತಿದೆ. ಸ್ಥಳೀಯವಾಗಿ ನಡೆದ ಸುದ್ದಿಗಳನ್ನು ರಾಜ್ಯಮಟ್ಟದಲ್ಲಿ ಬಿತ್ತರಿಸುವಂತಾದಾಗ ಹೆಸರುಗಳಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಪತ್ರಿಕೋದ್ಯಮ ಮತ್ತು ಸ್ವಾತಂತ್ರ್ಯ, ಪತ್ರಿಕೋದ್ಯಮ ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯ ಕುರಿತು ವಿಚಾರ ಸಂಕಿರಣಗಳನ್ನು ಆಯೋಜಿಸುವ ಮೂಲಕ ಯುವ ಪತ್ರಕರ್ತರಿಗೆ ಪತ್ರಿಕೋದ್ಯಮದ ತಿಳುವಳಿಕೆ ನೀಡಬೇಕು. ಯಾವುದು ಸತ್ಯ, ಯಾವುದು ಅಸತ್ಯ, ಯಾವುದು ಸಮಾಜಕ್ಕೆ ಒಳ್ಳೆಯದನ್ನು ಗುರುತಿಸಿ ಓದುಗರಿಗೆ ಸುದ್ದಿ ಕೊಡಬೇಕು ಎಂದು ತಿಳಿಸಿದರು.

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪ್ರಯಾಣಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಸಿಎಂ ಅವರೊಂದಿಗೆ ಚರ್ಚಿಸಲಾಗುವುದು. ಅದರ ಅನುಷ್ಠಾನಕ್ಕೆ ಇರುವ ತೊಡಕುಗಳನ್ನು ನಿವಾರಿಸಿ, ಮುಂದಿನ ಪತ್ರಿಕಾ ದಿನಾಚರಣೆ ಕಾರ್ಯಕ್ರಮದೊಳಗಾಗಿ ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ವ್ಯವಸ್ಥೆ ಒದಗಿಸುವ ಪ್ರಾಮಾಣಿಕ ಪ್ರಯತ್ನವನ್ನು ಸರ್ಕಾರ ಮಾಡಲಿದೆ ಎಂದು ತಿಳಿಸಿದರು.

ಪತ್ರಕರ್ತರಾಗಿ, ವಿಶಾಲ ಕರ್ನಾಟಕ ಪತ್ರಿಕೆ ಸ್ಥಾಪಿಸಿ, ಸಂಪಾದಕರಾಗಿ ಕೆಲಸ ಮಾಡಿರುವ ಕೆ.ಎಚ್. ಪಾಟೀಲ ಅವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿ, ಮುಂದಿನ ವರ್ಷದಿಂದ ಎರಡು ಪ್ರಶಸ್ತಿ ವಿತರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ಭರವಸೆ ನೀಡಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಉತ್ತಮವಾಗಿ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚು ಒಳ್ಳೆಯ ಕೆಲಸವಾಗುತ್ತವೆ ಎಂಬುದಕ್ಕೆ ಗದಗ ಜಿಲ್ಲಾ ಪತ್ರಕರ್ತರ ಸಂಘ ಸಾಕ್ಷಿಯಾಗಿದೆ. ಅವ್ವ ಸೇವಾ ಟ್ರಸ್ಟ್‌ನ ದತ್ತಿನಿಧಿ ಪ್ರಶಸ್ತಿಯನ್ನು ರಶ್ಮಿ ಅವರಿಗೆ ನೀಡಿರುವುದು ಸಾರ್ಥಕವಾಗಿದೆ. ಹೀಗಾಗಿ ನನ್ನ ತಾಯಿ ಆತ್ಮಕ್ಕೆ ಶಾಂತಿ ಸಿಕ್ಕಿದೆ ಎಂದು ಭಾವಿಸಿದ್ದೇನೆ ಎಂದರು.

ಅವ್ವ ಸೇವಾ ಟ್ರಸ್ಟ್‌ನ ಸಂಚಾಲಕ ಡಾ। ಬಸವರಾಜ ಧಾರವಾಡ ಮಾತನಾಡಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ತಾಯಿ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ಸ್ಥಾಪಿಸಿರುವ 'ಅವ್ವ ಸೇವಾ ಟ್ರಸ್ಟ್' ಕಳೆದ 13 ವರ್ಷಗಳಿಂದ ವಿವಿಧ ರಚನಾತ್ಮಕ ಕಾರ್ಯಗಳ ಮೂಲಕ ಸಮಾಜ ಸೇವೆಗೆ ಸಮರ್ಪಿಸಿಕೊಂಡಿದೆ. ಅದೇ ಮಾದರಿಯಲ್ಲಿ ಅವ್ವ ಸೇವಾ ಟ್ರಸ್ಟ್ ಮೂಲಕ ಸ್ಥಾಪಿಸಿರುವ ದತ್ತಿನಿಧಿಯಲ್ಲಿ ಪತ್ರಿಕಾ ರಂಗದಲ್ಲಿ ಗಣನೀಯ ಸೇವೆ ಸಲ್ಲಿಸಿದ ರಶ್ಮಿ ಎಸ್. ಅವರಿಗೆ ನೀಡಿರುವ ಮೊದಲ ಪ್ರಶಸ್ತಿ ಉತ್ತಮ ಆಯ್ಕೆಯಾಗಿದೆ ಎಂದು ತಿಳಿಸಿದರು.

ಅವ್ವ ದತ್ತಿನಿಧಿ ಪ್ರಶಸ್ತಿ ಸ್ವೀಕರಿಸಿದ ಹಿರಿಯ ಪತ್ರಕರ್ತೆ ರಶ್ಮಿ ಎಸ್. ಮಾತನಾಡಿ, ಮಾಧ್ಯಮ ಅಕಾಡೆಮಿ ಮತ್ತು ಸರ್ಕಾರ ಮಾಡದಿರುವ ಕೆಲಸವನ್ನು ಅವ್ವ ಸೇವಾ ಟ್ರಸ್ಟ್ ಇಂದು ಮಹಿಳೆಯರನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಅಧ್ಯಕ್ಷ ರಾಜು ಹೆಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲಾ ಸಂಘವು 1998ರಲ್ಲಿ ಅಸ್ತಿತ್ವಕ್ಕೆ ಬಂದಿದ್ದು ರಜತ ಮಹೋತ್ಸವ ಸಂಭ್ರಮದಲ್ಲಿದೆ. ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿರುವ ಪತ್ರಿಕಾ ಭವನದ ಮೊದಲ ಮಹಡಿಯಲ್ಲಿ ಮಾದರಿ ಸಮುದಾಯ ಭವನ ನಿರ್ಮಾಣಕ್ಕೆ ಸಚಿವ ಎಚ್.ಕೆ.ಪಾಟೀಲ ಸಹಕಾರ ನೀಡಬೇಕು. ಜತೆಗೆ ಕೆ.ಎಚ್. ಪಾಟೀಲ ಅವರ ಹೆಸರಲ್ಲಿ ದತ್ತಿನಿಧಿ ಸ್ಥಾಪಿಸಿದರೆ, ಅವರ ಹೆಸರಿನಲ್ಲಿ ಜಿಲ್ಲಾ ಪತ್ರಕರ್ತರಿಗೆ ಪ್ರಶಸ್ತಿ ನೀಡಲಾಗುವುದು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿದರು. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಾದ ಅನುಷಾ ಬಿ. ಕುಲಕರ್ಣಿ, ಪ್ರೀತಸಿಂಗ್ ಜಮಾದಾರ, ಚಕ್ರವರ್ತಿ ಕಾಶೀನಾಥ ಬಿಳಿಮಗ್ಗದ, ಕೀರ್ತಿ ಸಂಗಪ್ಪ ಮೇಣಸಗಿ, ಸ್ವಾತಿ ಎಸ್. ಕುಷ್ಟಗಿ, ಆದರ್ಶ ಸಿ. ಗೌಡಪ್ಪನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಚ್.ಎಂ. ಶರಣಪ್ಪನವರ್, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಕುದರಿಮೋತಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಸಂಘದ ಪತ್ರಕರ್ತರಾದ ಅಜಿತ್ ಹೊಂಬಾಳಿ, ಸಲೀಂ ಬಳಬಟ್ಟಿ, ಗಣೇಶ ಪೈ, ಛಾಯಾಗ್ರಾಹಕರಾದ ಶಂಕರ ಗುರಿಕಾರ, ಲಕ್ಷ್ಮಣ ವಗ್ಗಿ, ರಾಮಣ್ಣ ವಗ್ಗಿ ಸೇರಿ ಅನೇಕರು ಇದ್ದರು. ಆನಂದಯ್ಯ ವಿರಕ್ತಮಠ ನಿರೂಪಿಸಿದರು. ಶಿವಕುಮಾರ ಕುಷ್ಟಗಿ ಸ್ವಾಗತಿಸಿದರು.

# ಮಹತ್ವದ ಸುದ್ದಿಗಳನ್ನು ಎಲ್ಲ ಆವೃತ್ತಿಯಲ್ಲಿ ಪ್ರಕಟಿಸುವ ನಿಟ್ಟಿನಲ್ಲಿ ಪತ್ರಿಕೆಗಳು ಯೋಚಿಸಬೇಕು



ಅವ್ವ ದತ್ತಿನಿಧಿ ಪ್ರಶಸ್ತಿ ಸ್ವೀಕರಿಸಿದ ಹಿರಿಯ ಪತ್ರಕರ್ತೆ ರಶ್ಮಿ ಎಸ್. ಮಾತನಾಡಿ, ಮಾಧ್ಯಮ ಅಕಾಡೆಮಿ ಮತ್ತು ಸರ್ಕಾರ ಮಾಡದಿರುವ ಕೆಲಸವನ್ನು ಅವ್ವ ಸೇವಾ ಟ್ರಸ್ಟ್ ಇಂದು ಮಹಿಳೆಯರನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಪತ್ರಕರ್ತರು ಸಭಾ ಕಾರ್ಯಕ್ರಮಗಳಿಗಿಂತ ಜನರ ಸಮಸ್ಯೆಗಳಿಗೆ ಹೆಚ್ಚು ಧ್ವನಿಯಾಗಬೇಕು. ಜನರ ಸಮಸ್ಯೆಗಳ ಕುರಿತು ಸುದ್ದಿ ಬರೆದಾಗ ಉತ್ತಮ ಸ್ಪಂದನೆ ಸಿಗುತ್ತದೆ. ಅಧಿಕಾರಶಾಹಿ ಹಾಗೂ ಆಡಳಿತವರ್ಗವನ್ನು ಎಚ್ಚರಿಸುವುದರ ಜೊತೆಗೆ ಇವುಗಳಿಗೆ ಕೈಜೋಡಿಸಿದಾದ ಮಾತ್ರ ಒಳ್ಳೆಯ ಕೆಲಸವಾಗಲು ಸಾಧ್ಯವಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಮಾತನಾಡಿ, ಬಸವರಾಜ ಹೊರಟ್ಟಿ ಅವರು ಅವರ ಮಾತೋಶ್ರೀ ಅವರ ಹೆಸರಿನಲ್ಲಿ ಎಲೆಮರೆಯ ಕಾಯಿಯಂತಹ ಸಾಧಕರನ್ನು ಗುರುತಿಸಿ ಅವರಿಗೆ ಸನ್ಮಾನ ಮಾಡುವ ಕೆಲಸವನ್ನು ಮಾಡುತ್ತಿದ್ದಾರೆ. ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಕೆಲಸವನ್ನು ಮಾಡುವುದು ಉತ್ತಮ ಕೆಲಸವಾಗಿದೆ. ಮಕ್ಕಳಿಗೆ ಸನ್ಮಾನ ಮಾಡುವ ಮೂಲಕ ಅವರಲ್ಲಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಪ್ರೋತ್ಸಾಹ ನೀಡಲು ಈ ಸನ್ಮಾನ ಪೂರಕವಾಗಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಉತ್ತಮವಾಗಿ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚು ಒಳ್ಳೆಯ ಕೆಲಸವಾಗುತ್ತವೆ ಎಂಬುದಕ್ಕೆ ಗದಗ ಜಿಲ್ಲಾ ಪತ್ರಕರ್ತರ ಸಂಘ ಸಾಕ್ಷಿಯಾಗಿದೆ. ಅವ್ವ ಸೇವಾ ಟ್ರಸ್ಟ್‌ನ ದತ್ತಿನಿಧಿ ಪ್ರಶಸ್ತಿಯನ್ನು ರಶ್ಮಿ ಅವರಿಗೆ ನೀಡಿರುವುದು ಸಾರ್ಥಕವಾಗಿದೆ. ಹೀಗಾಗಿ ನನ್ನ ತಾಯಿ ಆತ್ಮಕ್ಕೆ ಶಾಂತಿ ಸಿಕ್ಕಿದೆ ಎಂದು ಭಾವಿಸಿದ್ದೇನೆ ಎಂದರು.

ಹೆತ್ತ ತಂದೆ-ತಾಯಿ, ಕಲಿತಿರುವ ಸಂಸ್ಥೆಯನ್ನು ಯಾವುದೇ ಕಾರಣಕ್ಕೂ ಮರೆಯಬಾರದು. ಕಳೆದ 13 ವರ್ಷಗಳಿಂದ ಅವ್ವ ಸೇವಾ ಟ್ರಸ್ಟ್ ಮೂಲಕ ರಾಜ್ಯಾದ್ಯಂತ ಹಲವು ರಚನಾತ್ಮಕ ಕಾರ್ಯಗಳನ್ನು ಮಾಡಲಾಗಿದೆ. ಡಿ. 6ರಂದು ಪ್ರತಿವರ್ಷ ತಾಯಿ ನೆನಪಿಗಾಗಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗುತ್ತಿದ್ದು, ಕಾರ್ಯಕ್ರಮಗಳನ್ನು ವೀಕ್ಷಿಸಿದ 9 ಕುಟುಂಬಗಳು ದೂರವಿಟ್ಟಿದ್ದ ತಮ್ಮ ತಂದೆ-ತಾಯಿಯನ್ನು ಪುನಃ ಮನೆಗೆ ಕರೆದುಕೊಂಡು ಅಕ್ಕರೆ ತೋರುತ್ತಿದ್ದಾರೆ ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ್ ಆಶಯ ನುಡಿಗಳನ್ನಾಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲಾ ಸಂಘವು 1998ರಲ್ಲಿ ಅಸ್ತಿತ್ವಕ್ಕೆ ಬಂದಿದ್ದು, ರಜತ ಮಹೋತ್ಸವ ಸಂಭ್ರಮದಲ್ಲಿದೆ. ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿರುವ ಪತ್ರಿಕಾ ಭವನದ ಮೊದಲ ಮಹಡಿಯಲ್ಲಿ ಮಾದರಿ ಸಮುದಾಯ ಭವನ ನಿರ್ಮಾಣಕ್ಕೆ ಸಚಿವ ಎಚ್.ಕೆ.ಪಾಟೀಲ ಸಹಕಾರ ನೀಡಬೇಕು. ಜತೆಗೆ ದಿ. ಕೆ.ಎಚ್.ಪಾಟೀಲ ಅವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿದರೆ, ಅವರ ಹೆಸರಿನಲ್ಲಿ ಜಿಲ್ಲಾ ಪತ್ರಕರ್ತರಿಗೆ ಪ್ರಶಸ್ತಿ ನೀಡಲಾಗುವುದುಟಿ ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಾದ ಅನಘಾ ಬಿ. ಕುಲಕರ್ಣಿ, ಪ್ರಣವಸಿಂಗ್ ಜಮಾದಾರ, ಚಕ್ರವರ್ತಿ ಕಾಶೀನಾಥ ಬಿಳಿಮಗ್ಗದ, ಕೀರ್ತಿ ಸಂಗಪ್ಪ ಮೆಣಸಗಿ, ಸ್ವಾತಿ ಎಸ್. ಕುಷ್ಟಗಿ, ಆದರ್ಶ ಸಿ. ಗಣಪ್ಪನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಕುದರಿಮೋತಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಚ್.ಎಂ.ಷರೀಫನವರ್, ಪತ್ರಕರ್ತರಾದ ಅಜಿತ್ ಹೊಂಬಾಳಿ, ಸಲೀಂ ಬಳಬಟ್ಟಿ, ಗಣೇಶ ಪೈ, ಛಾಯಾಗ್ರಾಹಕರಾದ ಶಂಕರ ಗುರಿಕಾರ, ಲಕ್ಷ್ಮಣ ವಗ್ಗಿ, ರಾಮಣ್ಣ ವಗ್ಗಿ ಸೇರಿ ಅನೇಕರು ಇದ್ದರು. ಆನಂದಯ್ಯ ವಿರಕ್ತಮಠ ನಿರೂಪಿಸಿದರು. ಶಿವಕುಮಾರ ಕುಷ್ಟಗಿ ಸ್ವಾಗತಿಸಿದರು.

## ಅವ್ವ ಟ್ರಸ್ಟ್ ದತ್ತಿ ನಿಧಿ ಪ್ರಶಸ್ತಿ ಪ್ರದಾನ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

# ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ಭರವಸೆ

■ ವಿಜಯವಾಣಿ ಸುದ್ದಿಜಾಲ ಗದಗ

ಜಿಲ್ಲೆ, ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಬದಲಾವಣೆಗೆ ಕಾರಣವಾಗುವಂತಹ ಸುದ್ದಿಗಳನ್ನು ಜಿಲ್ಲಾ ಮಟ್ಟಕ್ಕೆ ಸೀಮಿತಗೊಳಿಸಲಾಗುತ್ತಿದೆ. ಮಹತ್ವದ ಸುದ್ದಿಗಳನ್ನು ಎಲ್ಲ ಆವೃತ್ತಿಯಲ್ಲಿ ಪ್ರಕಟಿಸುವ ನಿಟ್ಟಿನಲ್ಲಿ ಪತ್ರಿಕೆಗಳು ಯೋಚಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸಲಹೆ ನೀಡಿದರು.

ನಗರದ ಶ್ರೀನಿವಾಸ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಣೆ ಹಾಗೂ ಅವ್ವ ಟ್ರಸ್ಟ್‌ನ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜನಕಲ್ಯಾಣ ಮಾಡುತ್ತಿರುವ ಜನಸೇವಕರು, ಉದಯೋನ್ಮುಖ ನಾಯಕರು, ಕಲಾವಿದರು, ಸಂಗೀತಗಾರರು, ಕ್ರೀಡಾಪಟುಗಳ ಸಾಧನೆಯನ್ನು ಪತ್ರಿಕೆಗಳಲ್ಲಿ ಜಿಲ್ಲಾ ಮಟ್ಟದ ಆವೃತ್ತಿಗಳಿಗೆ ಸೀಮಿತಗೊಳಿಸಲಾಗುತ್ತಿದೆ. ಸ್ಥಳೀಯ ಸುದ್ದಿಗಳನ್ನು ರಾಜ್ಯಮಟ್ಟದಲ್ಲಿ ಪ್ರಕಟಿಸಿದರೆ ಸಾಧಕರ ಪರಿಚಯ ಹೆಚ್ಚಿನ ಜನರಿಗೆ ಆಗುತ್ತದೆ ಎಂದು ತಿಳಿಸಿದರು.

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ ನಿಟ್ಟಿನಲ್ಲಿ ಸಿಎಂ ಜತೆ ಚರ್ಚಿಸಲಾಗುವುದು. ಈ ಸೌಲಭ್ಯದ ಅನುಷ್ಠಾನಕ್ಕಿರುವ ತೊಡಕುಗಳನ್ನು ನಿವಾರಿಸಿ, ಬಸ್‌ಪಾಸ್ ಒದಗಿಸುವ ಪ್ರಾಮಾಣಿಕ ಪ್ರಯತ್ನ ಸರ್ಕಾರ ಮಾಡಲಿದೆ. ಕೆ.ಎಚ್. ಪಾಟೀಲ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಲಾಗುವುದು ಎಂದು ತಿಳಿಸಿದರು.

ಡಾ. ಬಸವರಾಜ ಧಾರವಾಡ ಮಾತನಾಡಿ, ಅವ್ವ ಸೇವಾ ಟ್ರಸ್ಟ್ 13 ವರ್ಷಗಳಿಂದ ರಚನಾತ್ಮಕ ಕಾರ್ಯಗಳ ಮೂಲಕ ಸಮಾಜ ಸೇವೆಗೆ ಸಮರ್ಪಿಸಿಕೊಂಡಿದೆ ಎಂದು ತಿಳಿಸಿದರು.



ಗದಗ ಶ್ರೀನಿವಾಸ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು. ಸಚಿವ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ರಾಜು ಹೆಬ್ಬಳ್ಳಿ, ಇತರರಿದ್ದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಉತ್ತಮವಾಗಿ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚಿನ ಒಳ್ಳೆಯ ಕೆಲಸವಾಗುತ್ತವೆ ಎಂಬುದಕ್ಕೆ ಗದಗ ಜಿಲ್ಲಾ ಪತ್ರಕರ್ತರ ಸಂಘ ಸಾಕ್ಷಿಯಾಗಿದೆ. ದತ್ತಿನಿಧಿ ಪ್ರಶಸ್ತಿಯನ್ನು ರಶ್ಮಿ ಅವರಿಗೆ ನೀಡಿರುವುದು ಸಾರ್ಥಕವಾಗಿದೆ ಎಂದರು.

ಅವ್ವ ದತ್ತಿನಿಧಿ ಪ್ರಶಸ್ತಿಯನ್ನು ಪತ್ರಕರ್ತೆ ರಶ್ಮಿ ಎಸ್. ಅವರಿಗೆ ಪ್ರದಾನ ಮಾಡಲಾಯಿತು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿದರು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ ಆಶಯ ನುಡಿಗಳನ್ನಾಡಿದರು. ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಾದ ಅನಘಾ ಬಿ. ಕುಲಕರ್ಣಿ, ಪ್ರಣವಸಿಂಗ್ ಜಮಾದಾರ, ಚಕ್ರವರ್ತಿ ಕಾಶೀನಾಥ ಬಿಳಿಮಗ್ಗದ, ಕೀರ್ತಿ ಸಂಗಪ್ಪ ಮೆಣಸಗಿ, ಸ್ವಾತಿ ಎಸ್. ಕುಷ್ಟಗಿ, ಆದರ್ಶ ಸಿ. ಗಣಪ್ಪನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಕುದರಿಮೋತಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಇತರರಿದ್ದರು.



ಗದಗ : ನಗರದಲ್ಲಿ ಭಾನುವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅವ್ವ ಟ್ರಸ್ಟ್‌ನವರು ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಹಿರಿಯ ಪತ್ರಕರ್ತೆ ರಶ್ಮಿ ಎಸ್. ಅವರಿಗೆ ಅವ್ವ ದತ್ತಿನಿಧಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.



ಗದಗ : ನಗರದ ಶ್ರೀನಿವಾಸ ಭವನದಲ್ಲಿ ಭಾನುವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅವ್ವ ಟ್ರಸ್ಟ್‌ನವರು ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ನೆರವೇರಿಸಿದರು.

# ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್

## ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಭರವಸೆ



ಗದಗ ನಗರದ ಶ್ರೀನಿವಾಸ ಭವನದಲ್ಲಿ ಭಾನುವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪತ್ರಕರ್ತರ ಮಕ್ಕಳನ್ನು ಸನ್ಮಾನಿಸಲಾಯಿತು.

■ **ವಿಕ ಸುದ್ದಿಲೋಕ** ಗದಗ

ಪತ್ರಕರ್ತರು ಸಮಾಜಕ್ಕೆ ಒಳ್ಳೆಯದನ್ನು ಗುರುತಿಸಿ ಓದುಗರಿಗೆ ಸುದ್ದಿ ಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ನಗರದ ಶ್ರೀನಿವಾಸ ಭವನದಲ್ಲಿ ಭಾನುವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅವ್ವ ಟ್ರಸ್ಟ್‌ನವರು ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪ್ರಯಾಣಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಸಿಎಂ ಅವರೊಂದಿಗೆ ಚರ್ಚಿಸಲಾಗುವುದು. ಆದರ ಅನುಷ್ಠಾನಕ್ಕೆ ಇರುವ ತೊಡಕು ನಿವಾರಿಸಿ ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ವ್ಯವಸ್ಥೆ ಒದಗಿಸುವ ಪ್ರಾಮಾಣಿಕ ಪ್ರಯತ್ನವನ್ನು ಸರಕಾರ ಮಾಡಲಿದೆ ಎಂದು ತಿಳಿಸಿದರು.

ಅವ್ವ ದತ್ತಿನಿಧಿ ಪ್ರಶಸ್ತಿ ಸ್ವೀಕರಿಸಿದ ಹಿರಿಯ ಪತ್ರಕರ್ತೆ ರಶ್ಮಿ ಎಸ್. ಮಾತನಾಡಿದರು.

**ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ**

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಉತ್ತಮವಾಗಿ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚು ಒಳ್ಳೆಯ ಕೆಲಸವಾಗುತ್ತವೆ.

ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ, ಡಾ. ಬಸವರಾಜ ಧಾರವಾಡ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಾದ ಅನಘಾ ಬಿ. ಕುಲಕರ್ಣಿ, ಪ್ರಣವಸಿಂಗ್ ಜಮಾದಾರ, ಚಕ್ರವರ್ತಿ ಕಾಶೀನಾಥ ಬೀಳಿಮಗ್ಗದ, ಕೀರ್ತಿ ಮಣಸಗಿ, ಸ್ವಾತಿ ಎಸ್. ಕುಷ್ಟಗಿ, ಆದರ್ಶ ಸಿ. ಗಣಪ್ಪನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಕುದರಿಮೋತಿ, ವಾರ್ತಾಧಿಕಾರಿ ವಸಂತ ಮಡ್ಲೂರ ಇದ್ದರು. ಶಿವಕುಮಾರ ಕುಷ್ಟಗಿ ಸ್ವಾಗತಿಸಿದರು. ಆನಂದಯ್ಯ ವಿರಕ್ತಮಠ ನಿರೂಪಿಸಿದರು.

ಪ್ರಜಾವಾಣಿ ಸೋಮವಾರ • ಜುಲೈ 17, 2023



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ಶ್ರೀನಿವಾಸ ಭವನದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪತ್ರಕರ್ತೆಯರಿಗೆ ನೀಡುವ ರಾಜ್ಯ ಮಟ್ಟದ ಅವ್ವ ದತ್ತಿ ನಿಧಿ ಪ್ರಶಸ್ತಿಯನ್ನು 'ಪ್ರಜಾವಾಣಿ' ಪತ್ರಿಕೆಯ ಮುಖ್ಯ ಉಪ ಸಂಪಾದಕಿ ರಶ್ಮಿ ಎಸ್‌. ಅವರಿಗೆ ಸಚಿವ ಎಚ್‌.ಕೆ.ಪಾಟೀಲ ಪ್ರದಾನ ಮಾಡಿದರು



ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 80ಕ್ಕೂ ಅಧಿಕ ಅಂಕ ಗಳಿಸಿದ ಪತ್ರಕರ್ತರ ಮಕ್ಕಳಾದ ಅನಘಾ ಬಿ. ಕುಲಕರ್ಣಿ, ಪ್ರಣವಸಿಂಗ್‌ ಜಮಾದಾರ, ಚಕ್ರವರ್ತಿ ಕಾಶೀನಾಥ ಬಿಳಿಮಗ್ಗದ, ಕೀರ್ತಿ ಸಂಗಪ್ಪ ಮೆಣಸಗಿ, ಸ್ವಾತಿ ಎಸ್‌. ಕುಷ್ಟಗಿ, ಆದರ್ಶ ಸಿ. ಗಣಪ್ಪನವರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು

### ಪತ್ರಿಕಾ ದಿನಾಚರಣೆ: 'ಅವ್ವ' ದತ್ತಿ ನಿಧಿ ಪ್ರಶಸ್ತಿ ಪ್ರದಾನ: ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ

# ಮಹತ್ವದ ಸುದ್ದಿ ಎಲ್ಲರಿಗೂ ತಲುಪಲಿ: ಎಚ್ಕೆ

ಪ್ರಜಾವಾಣಿ ವಾರ್ತೆ

ಗದಗ: 'ಜಿಲ್ಲೆ, ರಾಜ್ಯ, ರಾಷ್ಟ್ರದ ಬದಲಾವಣೆಗೆ ಕಾರಣವಾಗುವಂತಹ ಸುದ್ದಿಗಳು ಕೂಡ ಇಂದು ಜಿಲ್ಲಾ ಮಟ್ಟಕ್ಕೆ ಸೀಮಿತಗೊಳ್ಳುತ್ತಿರುವುದು ವಿಷಾದನೀಯ. ಮಹತ್ವದ ಸುದ್ದಿಗಳನ್ನು ಎಲ್ಲ ಆವೃತ್ತಿಯಲ್ಲಿ ಪ್ರಕಟಿಸುವ ನಿಟ್ಟಿನಲ್ಲಿ ಪತ್ರಿಕೆಗಳು ಯೋಚಿಸಬೇಕು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್‌.ಕೆ.ಪಾಟೀಲ ಅಭಿಪ್ರಾಯಪಟ್ಟರು.

ನಗರದ ಶ್ರೀನಿವಾಸ ಭವನದಲ್ಲಿ ಭಾನುವಾರ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ 'ಅವ್ವ' ಟ್ರಸ್ಟ್‌ನವರು ಸ್ಥಾಪಿಸಿರುವ ದತ್ತಿನಿಧಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

'ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ ಪ್ರಯಾಣಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಸಿಎಂ ಅವರೊಂದಿಗೆ ಚರ್ಚಿಸಲಾಗುವುದು. ಅದರ ಅನುಷ್ಠಾನಕ್ಕೆ ಇರುವ ತೊಡಕುಗಳನ್ನು ನಿವಾರಿಸಿ, ಮುಂದಿನ ಪತ್ರಿಕಾ ದಿನಾಚರಣೆ ಕಾರ್ಯಕ್ರಮದೊಳಗಾಗಿ ಗ್ರಾಮೀಣ ಪತ್ರಕರ್ತರಿಗೆ ಬಸ್‌ ಪಾಸ್‌ ವ್ಯವಸ್ಥೆ ಒದಗಿಸುವ ಪ್ರಾಮಾಣಿಕ ಪ್ರಯತ್ನವನ್ನು ಸರ್ಕಾರ ಮಾಡಲಿದೆ' ಎಂದು ತಿಳಿಸಿದರು.

'ಪತ್ರಕರ್ತರಾಗಿ, ವಿಶಾಲ ಕರ್ನಾಟಕ ಪತ್ರಿಕೆ ಸ್ಥಾಪಿಸಿ, ಸಂಪಾದಕರಾಗಿ ಕೆಲಸ ಮಾಡಿರುವ ಕೆ.ಎಚ್‌. ಪಾಟೀಲ ಅವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿ, ಮುಂದಿನ ವರ್ಷದಿಂದ ಎರಡು ಪ್ರಶಸ್ತಿ ವಿತರಿಸಲು ಕ್ರಮಕೈಗೊಳ್ಳಲಾಗುವುದು' ಎಂದರು.

ವಿಧಾನ ಪರಿಷತ್‌ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಉತ್ತಮವಾಗಿ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಿದರೆ ಇನ್ನೂ ಹೆಚ್ಚು ಒಳ್ಳೆಯ ಕೆಲಸವಾಗುತ್ತವೆ ಎಂಬುದಕ್ಕೆ ಗದಗ ಜಿಲ್ಲಾ ಪತ್ರಕರ್ತರ ಸಂಘ ಸಾಕ್ಷಿಯಾಗಿದೆ. ಅವ್ವ ಸೇವಾ ಟ್ರಸ್ಟ್‌ನ ದತ್ತಿನಿಧಿ ಪ್ರಶಸ್ತಿಯನ್ನು 'ಪ್ರಜಾವಾಣಿ' ಪತ್ರಿಕೆಯ ಮುಖ್ಯ ಉಪಸಂಪಾದಕಿ ರಶ್ಮಿ ಎಸ್‌. ಅವರಿಗೆ ನೀಡಿರುವುದು ಸಾರ್ಥಕವಾಗಿದೆ. ಹೀಗಾಗಿ ನನ್ನ ತಾಯಿ ಆತ್ಮಕ್ಕೆ ಶಾಂತಿ ಸಿಕ್ಕಿದೆ ಎಂದು ಭಾವಿಸಿದ್ದೇನೆ' ಎಂದರು.

ವಿಧಾನ ಪರಿಷತ್‌ ಸದಸ್ಯ ಎಸ್‌.ವಿ.ಸಂಕನೂರ, ಡಾ. ಬಸವರಾಜ ಧಾರವಾಡ ಮಾತನಾಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ್‌ ಆಶಯ ನುಡಿಗಳನ್ನಾಡಿದರು.ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ ಮಾತನಾಡಿದರು.

ಜಿಲ್ಲಾ ಪೊಲೀಸ್‌ ವರಿಷ್ಠಾಧಿಕಾರಿ ಬಿ.ಎಸ್‌.ನೇಮಗೌಡ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಕುದರಿಮೋತಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಚ್‌.ಎಂ.ಷರೀಫನವರ್‌, ಪತ್ರಕರ್ತರಾದ ಅಜಿತ್‌ ಹೊಂಬಾಳಿ, ಸಲೀಂ ಬಳಬಟ್ಟಿ, ಗಣೇಶ ಪೈ, ಛಾಯಾಗ್ರಾಹಕರಾದ ಶಂಕರ ಗುರಿಕಾರ, ಲಕ್ಷ್ಮಣ ವಗ್ಗಿ, ರಾಮಣ್ಣ ವಗ್ಗಿ ಸೇರಿ ಅನೇಕರು ಇದ್ದರು. ಅನಂದಯ್ಯ ವಿರಕ್ತಮಠ ನಿರೂಪಿಸಿದರು. ಶಿವಕುಮಾರ ಕುಷ್ಟಗಿ ಸ್ವಾಗತಿಸಿದರು.

## 'ಅಭ್ಯುದಯ ಪತ್ರಿಕೋದ್ಯಮ ಅಜರಾಮರ'

ಗದಗ: 'ದುಡಿಮೆ ಇಲ್ಲದ ಯಾವುದೇ ಗಳಿಕೆಯೂ ಬೇಡ ಎಂಬ ನೀತಿಯನ್ನು ಪತ್ರಕರ್ತರು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಯಾವುದೇ ವ್ಯಕ್ತಿಯಿಂದ ನಮಗೆ ಬುದ್ಧಿ ಹೇಳುವಂತಹ ಮಾತು ಕೇಳಿಸಿಕೊಂಡು ಮುಜುಗರಕ್ಕೆ ಒಳಗಾಗುವ ಸಂದರ್ಭ ಎದುರಾಗುವುದಿಲ್ಲ' ಎಂದು ಹಿರಿಯ ಪತ್ರಕರ್ತೆ ರಶ್ಮಿ ಎಸ್‌. ಹೇಳಿದರು.

ಮಹಿಳಾ ಪತ್ರಕರ್ತೆಯರಿಗೆ ನೀಡುವ ರಾಜ್ಯ ಮಟ್ಟದ ಅವ್ವ ದತ್ತಿ ನಿಧಿ ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡಿದರು.

'ಎಲ್ಲರ ನಿರೀಕ್ಷೆಗಳು ಪತ್ರಿಕಾರಂಗದ ಬಗ್ಗೆ ಇರುತ್ತದೆ. ಆದರೆ, ಪತ್ರಕರ್ತರೆಲ್ಲರೂ ಪತ್ರಿಕೋದ್ಯಮದ ಗೊಂಬೆಗಳು. ಹಾಗಿದ್ದರೂ, ಸಿಂಹಪಾಲು ಪತ್ರಕರ್ತರು ಅಂತಃಕರಣದಿಂದ ಕೆಲಸ ಮಾಡುತ್ತಿದ್ದಾರೆ. ಅದೇ ಕಾರಣಕ್ಕೆ ಅಭ್ಯುದಯ ಪತ್ರಿಕೋದ್ಯಮ ಇಂದಿಗೂ ಮಿಂಚುತ್ತಿದೆ ಎಂದರು.

'ಅನ್ನ ಮತ್ತು ಅಂತಃಕರಣದ ಪ್ರಶ್ನೆ ಬಂದಾಗ ಪತ್ರಕರ್ತರು ಎರಡಕ್ಕೂ ಎದೆಕೊಟ್ಟು ಬರೆಯುತ್ತಾರೆ. ಕೆಲವರು ಪ್ರಶ್ನೆ ಮತ್ತು ಮಾಹಿತಿ ಬಿಟ್ಟು ಇನ್ನೆಲ್ಲವನ್ನೂ ಕೇಳುತ್ತಾರೆ. ಮತ್ತೊಂದು ವರ್ಗದ ಪತ್ರಕರ್ತರು ಪ್ರಶ್ನೆ ಮಾಹಿತಿ ಬಿಟ್ಟು ಇನ್ನೇನನ್ನೂ ಕೇಳಿಲ್ಲ. ಪತ್ರಕರ್ತ ಆದವನು ಯಾವತ್ತೂ ಕಾಣಿಸಿಕೊಳ್ಳಬಾರದು, ಕೇಳಿಸಬಾರದು. ಅಜ್ಞಾತವಾಗಿದ್ದಷ್ಟು ನಿಷ್ಪಕ್ಷಪಾತಿ ಆಗಿರುತ್ತೇವೆ. ಒಬ್ಬ ಪತ್ರಕರ್ತ ಪಕ್ಷಪಾತಿ ಆಗುವುದಕ್ಕೆ ಈ ಭಾಗ ಎಷ್ಟು ಕಾರಣವೋ ಆ ಕಡೆಯದ್ದೂ ಅಷ್ಟೇ ಪಾತ್ರವಿರುತ್ತದೆ' ಎಂದು ಹೇಳಿದರು. 'ಹಾಗಾಗಿ, ಪತ್ರಿಕಾರಂಗದ ಮಾತನಾಡುವಾಗ ಎಲ್ಲ ಆದರ್ಶಗಳಿಗೂ 'ಕೋಟ್‌' ಹಾಕಬೇಕಾಗುತ್ತದೆ. ಪತ್ರಕರ್ತನ ಬರವಣಿಗೆಯಲ್ಲಿ ಯಾವುದೇ ಜಾತಿ, ಮತ, ಭೇದ ಇರಬಾರದು. ನಮ್ಮೊಳಗಿನ ಅಂತಃಜಾಗೃತಿ ಸತ್ಯದ ಪರ, ಜೀವಪರ ಮತ್ತು ಜನಪರ ಆಗಿರಬೇಕು' ಎಂದು ತಿಳಿಸಿದರು.